**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2024-25ನೇ ಸಾಲಿನಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಸರ್ಕಾರದ ವಿವೇಚನಾ ಕೋಟಾದಡಿ ಕಾಮಗಾರಿಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಪತ್ರ ಸಂಖ್ಯೆ:ಪಿಡಿಎಸ್ 24 ಪಿಎಂಎಸ್ 2021, ದಿನಾಂಕ:21.04.2021.
2. ಮಾನ್ಯ ಯೋಜನಾ ಸಚಿವರ ಟಿಪ್ಪಣಿ ಸಂಖ್ಯೆ: ಯೋ&ಸಾಂ.ಸ/ಗೃಕ/32/2024,ದಿನಾಂಕ:29.01.2024

*******

**ಪ್ರಸ್ತಾವನೆ**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರದ ಪತ್ರದಲ್ಲಿ 2024-25ನೇ ಸಾಲಿನ ಆಯವ್ಯಯದಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ಒದಗಿಸಲಾಗಿರುವ (ಬಂಡವಾಳ/ವಿ.ಘ.ಯೋ/ ಗಿ.ಉ.ಯೋ) ಅನುದಾನದಲ್ಲಿ ಶೇ.5ರಷ್ಟನ್ನು ಸರ್ಕಾರದ ವಿವೇಚನಾ ಕೋಟಾದಡಿ ನಿಗಧಿಪಡಿಸಿ ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರಿಂದ ಕಾಮಗಾರಿಗಳ ಪ್ರಸ್ತಾವನೆಯನ್ನು ಪಡೆದು ಅನುಷ್ಠಾನಗೊಳಿಸುವಂತೆ ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಟಿಪ್ಪಣಿಯಲ್ಲಿ ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು, 2024-25ನೇ ಸಾಲಿನ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿವತಿಯಿಂದ ಲಭ್ಯವಿರುವ ಮೊತ್ತದಲ್ಲಿ ಈ ಕೆಳಕಂಡ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡುವಂತೆ ಆದೇಶಿಸಿರುತ್ತಾರೆ.

| ಕ್ರ. ಸಂ | ಕಾಮಗಾರಿ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಶ್ರೀ ಗೌರಿ ದೇವಿ ದೇವಸ್ಥಾನದ ಆವರಣದಲ್ಲಿ ಒಂದು ಸಮುದಾಯ ಭವನ ನಿರ್ಮಾಣ. | 50.00 |
| **ಒಟ್ಟು** | | **50.00** |

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ 2024-25ನೇ ಸಾಲಿನ ಸರ್ಕಾರದ ವಿವೇಚನಾ ಕೋಟಾದಡಿ ರೂ.**50.00** ಲಕ್ಷಗಳ ಒಂದು ಕಾಮಗಾರಿಯ ಕ್ರಿಯಾಯೋಜನೆಗೆ ಅನುಮೋದನೆ ನೀಡಲು ಸರ್ಕಾರವು ಉದ್ದೇಶಿಸಿದ್ದು, ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಪಿಡಿಎಸ್ 12 ಪಿಟಿಪಿ 2024, ಬೆಂಗಳೂರು ದಿನಾಂಕ: 30.08.2024**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ 2024-25ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ.**3950.00** ಲಕ್ಷಗಳ (ಬಂಡವಾಳ/ ವಿ.ಘ.ಯೋ/ ಗಿ.ಉ.ಯೋ) ಅನುದಾನದಲ್ಲಿ ಸರ್ಕಾರದ ವಿವೇಚನಾ ಕೋಟಾದಡಿ (GDQ)ಗೆ ಮೀಸಲಿಟ್ಟ ರೂ.197.50 ಲಕ್ಷಗಳ ಅನುದಾನದಲ್ಲಿ ರೂ.**50.00** (ರೂ.ಐವತ್ತು ಲಕ್ಷಗಳು ಮಾತ್ರ) ಲಕ್ಷಗಳನ್ನು ಈ ಕೆಳಗೆ ನಮೂದಿಸಿರುವ ಒಂದು ಕಾಮಗಾರಿಯ ಕ್ರಿಯಾ ಯೋಜನೆಗೆ ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

| ಕ್ರ.ಸಂ | ಕಾಮಗಾರಿಯ ವಿವರ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 01 | ಶ್ರೀ ಗೌರಿ ದೇವಿ ದೇವಸ್ಥಾನದ ಆವರಣದಲ್ಲಿ ಒಂದು ಸಮುದಾಯ ಭವನ ನಿರ್ಮಾಣ. | 50.00 |

--2.,

<u>ಷರತ್ತುಗಳು:-</u>

1. ಅನುಮೋದನೆ ನೀಡಿರುವ ಕ್ರಿಯಾಯೋಜನೆಯ ಕಾಮಗಾರಿಗಳನ್ನು 2024-25ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ **ಕೆಟಿಪಿಪಿ ಕಾಯ್ದೆಯನ್ವಯ** ನಿಯಮಾನುಸಾರ ಅನುಷ್ಠಾನಗೊಳಿಸತಕ್ಕದ್ದು.
2. ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಮಾರ್ಗಸೂಚಿಗಳನ್ವಯ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
3. SCP/TSP ಕಾಮಗಾರಿಗಳನ್ನು SCP/TSP ಕಾಯ್ದೆ 2013ರನ್ವಯ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಸಮುದಾಯದವರಿಗೆ ಉಪಯೋಗವಾಗುವಂತೆ ಅನುಷ್ಠಾನಗೊಳಿಸತಕ್ಕದ್ದು.
4. ಕ್ರಿಯಾಯೋಜನೆಗೆ ಅನುಮೋದನೆ ನೀಡಿರುವ ಅಂದಾಜು ಮಿತಿಯಲ್ಲಿಯೇ (ಟೆಂಡರ್ ಪ್ರೀಮಿಯಂ ಸೇರಿ) ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವು ಸರ್ಕಾರವು ಆಯಾ ಸಂದರ್ಭದಲ್ಲಿ ಹೊರಡಿಸುವ ಆದೇಶ ಮತ್ತು ಸುತ್ತೋಲೆಗೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಡಿ.ಚಂದ್ರಶೇಖರಯ್ಯ)**
ನಿರ್ದೇಶಕರು
ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗ.
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು,(ಲೆಕ್ಕ ಪತ್ರ)/(ಲೆಕ್ಕ ಪರಿಶೋಧನಾ ಮತ್ತು 1&2, ಕರ್ನಾಟಕ, ಬೆಂಗಳೂರು.
2. ಕಾರ್ಯದರ್ಶಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ತಮಟಕಲ್ಲು ರಸ್ತೆ ಚಿತ್ರದುರ್ಗ-577 502.
3. ಸರ್ಕಾರದ ಕಾರ್ಯದರ್ಶಿ-2, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4. ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಆಪ್ತ ಕಾರ್ಯದರ್ಶಿ , ವಿಕಾಸಸೌಧ, ಬೆಂಗಳೂರು.
5. ಶಾಖಾಧಿಕಾರಿ, ಸ್ಕೀಮರ ಶಾಖೆ, ಯೋಜನಾ ಇಲಾಖೆ. (ಕಾಂಪೆಂಡಿಯಮ್ ಗೋಸ್ಕರ)
6. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿ.

*****

ಕಾರ್ಯದರ್ಶಿಯವರ ಕಛೇರಿ
ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ
ಚಿತ್ರದುರ್ಗ-577 502
ಸಂ. 513 ದಿನಾಂಕ 6/9/24
ಅ.ಉಸಿ(ಯೋ),ಉಹನಿ. ಉಕಾ. ಮೊ.ಕಾ